ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಭದ್ರಾ ಮೇಲ್ದಂಡೆ ಹಾಗೂ ಎತ್ತಿನ ಹೊಳೆ ಯೋಜನೆಯ ಬಗ್ಗೆ

ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1304 (1472) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಧ್ಯ ಕರ್ನಾಟಕ ಮತ್ತು ಭದ್ರಾ ಮೇಲ್ದಂಡೆ ಹಾಗೂ ಎತ್ತಿಹೊಳೆ ಯೋಜನೆಯ ಅನುಷ್ಠಾನಕ್ಕೆ ವಿಶ್ವೇಶ್ವರಯ್ಯ ಜಲ ನಿಗಮ ಎನ್ನುವ ಪ್ರತ್ಯೇಕ ನೀರಾವರಿ ನಿಗಮವನ್ನು ಸ್ಥಾಪಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಈ ನಿಗಮದ ವ್ಯಾಪ್ತಿಗೆ ಬರುವ ಜಿಲ್ಲೆಗಳು ಯಾವುವು; ಹಾಗೂ ಈ ನಿಗಮದ ವ್ಯಾಪ್ತಿಯಲ್ಲಿ ತೆಗೆದುಕೊಳ್ಳುವ ನೀರಾವರಿ ಕಾಮಗಾರಿಗಳಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಇ) 2016-17, 2017-18, 2018-19 ಮತ್ತು 2019-20ನೇ ಸಾಲಿನಲ್ಲಿ ಈ ನಿಗಮದ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಲ್ಲಿ ಕೈಗೊಳ್ಳುವ ಕಾಮಗಾರಿಗಳಿಗಾಗಿ ಬಿಡುಗಡೆ ಮಾಡಿರುವ ಹಣವೆಷ್ಟು; ಬಿಡುಗಡೆ ಮಾಡಿದ ಹಣದಲ್ಲಿ ಇಲ್ಲಿಯ ತನಕ ಖರ್ಚು ಮಾಡಿರುವ ಹಣವೆಷ್ಟು; (ವಿವರ ನೀಡುವುದು)

(ಈ) ಅದೇ ರೀತಿಯಾಗಿ ತುಮಕೂರು ಜಿಲ್ಲೆಯಲ್ಲಿ ಸದರಿ ನಿಗಮದ ವ್ಯಾಪ್ತಿಗೆ ಬರುವ ಯಾವ ಯಾವ ಕಾಮಗಾರಿಗಳನ್ನು ಇಲ್ಲಿಯ ತನಕ ಕೈಗೊಳ್ಳಲಾಗಿದೆ ಹಾಗೂ ಇದಕ್ಕಾಗಿ ಬಿಡುಗಡೆ ಮಾಡಿ ಖರ್ಚು ಮಾಡಿರುವ ಹಣವೆಷ್ಟು ; (ವಿವರವಾದ ಮಾಹಿತಿಯನ್ನು ನೀಡುವುದು)

(ಉ) ಎತ್ತಿನಹೊಳೆ ಯೋಜನೆಯ ಕಾಮಗಾರಿಗಳನ್ನು ಸದರಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆಯೇ ; ಹಾಗೂ ಈ ಯೋಜನೆಗೆ ಇಲ್ಲಿಯ ತನಕ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಊ) ಬಿಡುಗಡೆ ಮಾಡಿದ ಅನುದಾನದಲ್ಲಿ ಇಲ್ಲಿಯ ತನಕ ಖರ್ಚು ಮಾಡಿ ಎಲ್ಲೆಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)